# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 622 |
| ಸದಸ್ಯರ ಹೆಸರು | : | ಶ್ರೀ ಸಿ.ಟಿ.ರವಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 09-03-2026 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ರೈತರು ಐ.ಪಿ. ಸೆಟ್‌ಗಳಿಗೆ ಅಳವಡಿಸಿರುವ ವಿದ್ಯುತ್ ಪರಿವರ್ತಕಗಳು ಸುಟ್ಟುಹೋದಲ್ಲಿ ದುರಸ್ಥಿಪಡಿಸಿ ಪುನರ್ ಸ್ಥಾಪಿಸಲು ಸರ್ಕಾರದಿಂದ ನಿಗದಿಪಡಿಸಿರುವ ಕಾಲಮಿತಿ ಎಷ್ಟು; | ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ನಿಯಮಾವಳಿಗಳ ಪ್ರಕಾರ ನಗರ ಪ್ರದೇಶದಲ್ಲಿ 24 ಗಂಟೆ ಮತ್ತು ಗ್ರಾಮೀಣ ಪ್ರದೇಶದಲ್ಲಿ 72 ಗಂಟೆಯಲ್ಲಿ ಸುಟ್ಟು ಹೋದ ಪರಿವರ್ತಕವನ್ನು ಪುನರ್ ಸ್ಥಾಪಿಸಲು ಕಾಲ ಮಿತಿಯನ್ನು ನಿಗದಿಪಡಿಸಲಾಗಿರುತ್ತದೆ. |
| ಆ) | ಚಿಕ್ಕಮಗಳೂರು ಜಿಲ್ಲೆಯಲ್ಲಿ ಅದರಲ್ಲೂ ವಿಶೇಷವಾಗಿ ಬಯಲು ಸೀಮೆ ಭಾಗದ ಕಡೂರು ತಾಲ್ಲೂಕಿನಲ್ಲಿ ಸುಟ್ಟು ಹೋದ ವಿದ್ಯುತ್ ಪರಿವರ್ತಕಗಳನ್ನು ದುರಸ್ಥಿಪಡಿಸಲು 15-20 ದಿನಗಳು ತೆಗೆದುಕೊಳ್ಳುತ್ತಿರುವುದರಿಂದ ಬೆಳೆಗಳಿಗೆ ಸಕಾಲದಲ್ಲಿ ನೀರುಣಿಸಲು ಸಾಧ್ಯವಾಗದೇ ಬೆಳೆ ನಷ್ಟವಾಗಿ ರೈತರಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಚಿಕ್ಕಮಗಳೂರು ಜಿಲ್ಲೆಯಲ್ಲಿ ವಿಫಲಗೊಂಡ ಪರಿವರ್ತಕಗಳನ್ನು ನಿಗದಿತ ಸಮಯದಲ್ಲಿ ಬದಲಾಯಿಸಲಾಗುತ್ತಿದೆ. ಕಡೂರು ತಾಲ್ಲೂಕಿನಲ್ಲಿ ಪ್ರಸಕ್ತ ಸಾಲಿನಲ್ಲಿ 1,058 ಸಂಖ್ಯೆಯ ಪರಿವರ್ತಕಗಳು ವಿಫಲಗೊಂಡಿದ್ದು, ಎಲ್ಲಾ ಪರಿವರ್ತಕಗಳನ್ನು ನಿಗದಿತ ಕಾಲಮಿತಿಯೊಳಗೆ ಬದಲಾಯಿಸಲಾಗಿದೆ. |
| ಇ) | ಕಾಲಮಿತಿಯಲ್ಲಿ ವಿದ್ಯುತ್ ಪರಿವರ್ತಕ ದುರಸ್ಥಿಪಡಿಸಿ ಪುನರ್ ಸ್ಥಾಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ಒದಗಿಸುವುದು) | ವಿದ್ಯುತ್ ಪರಿವರ್ತಕ ವಿಫಲಗೊಂಡ ಸಂದರ್ಭದಲ್ಲಿ ದುರಸ್ಥಿ ಕೇಂದ್ರಗಳಲ್ಲಿ ದುರಸ್ಥಿಗೊಳಿಸಿ KERC ನಿಗದಿಪಡಿಸಿದ ಕಾಲಮಿತಿಯೊಳಗೆ ವಿಫಲಗೊಂಡ ಪರಿವರ್ತಕಗಳನ್ನು ಬದಲಾಯಿಸಲಾಗುತ್ತಿದೆ. KERC ನಿಗದಿಪಡಿಸಿದಂತೆ ನಗರ ಪ್ರದೇಶದಲ್ಲಿ 24 ಗಂಟೆಗಳು ಮತ್ತು ಗ್ರಾಮೀಣ ಪ್ರದೇಶದಲ್ಲಿ 72 ಗಂಟೆಗಳೊಳಗೆ ವಿಫಲಗೊಂಡ ಪರಿವರ್ತಕವನ್ನು ಬದಲಾಯಿಸಲಾಗುತ್ತಿದೆ. |

ಸಂಖ್ಯೆ: ಎನರ್ಜಿ 44 ಇಬಿಎಸ್ 2026

(ಕೆ.ಜೆ.ಜಾರ್ಜ್)
ಇಂಧನ ಸಚಿವರು